ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಮಂಗಳವಾರ, ದಿನಾಂಕ : 08 ನೇ ಡಿಸೆಂಬರ್, 2020

ನ್ಯಾಯಬೆಲೆ ಅಂಗಡಿಗಳನ್ನು ತೆರೆಯಲು ಇರುವ ಮಾನದಂಡಗಳ ಕುರಿತು

ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

131 (149) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ನ್ಯಾಯಬೆಲೆ ಅಂಗಡಿಗಳನ್ನು ತೆರೆಯಲು ಇರುವ ಮಾನದಂಡಗಳೇನು ; ಒಂದು ನ್ಯಾಯಬೆಲೆ ಅಂಗಡಿಗೆ ನಿಗದಿಪಡಿಸಿರುವ ಕನಿಷ್ಠ ಹಾಗೂ ಗರಿಷ್ಠ ಕಾರ್ಡ್‌ಗಳ ಸಂಖ್ಯೆ ಎಷ್ಟು ;

(ಆ) ಒಂದು ನ್ಯಾಯಬೆಲೆ ಅಂಗಡಿಯಲ್ಲಿ ಸಾವಿರ ಕಾರ್ಡ್‌ಗಿಂತ ಹೆಚ್ಚಿದ್ದಲ್ಲಿ ಹೊಸ ನ್ಯಾಯಬೆಲೆ ಅಂಗಡಿ ಪ್ರಾರಂಭಿಸಲು ಸರ್ಕಾರದ ಉದ್ದೇಶವಿದೆಯೇ ; ಹಾಗಿದ್ದಲ್ಲಿ, ಶಿವಮೊಗ್ಗ ನಗರದಲ್ಲಿ ಹೊಸ ನ್ಯಾಯಬೆಲೆ ಅಂಗಡಿಗಳ್ನನು ಪ್ರಾರಂಭಿಸಲು ಸರ್ಕಾರ ಯೋಚಿಸಿದೆಯೇ ;

(ಇ) ಸರ್ಕಾರದ ಒಂದು ದೇಶ ಒಂದು ಕಾರ್ಡ್ ಹೊಸ ಯೋಜನೆಯಂತೆ ಶಿವಮೊಗ್ಗ ನಗರದ ನ್ಯಾಯಬೆಲೆ ಅಂಗಡಿಯವರು ತಮಗೆ ವಿತರಿಸಿರುವ ಪಡಿತರ ಪದಾರ್ಥಗಳನ್ನು ಸ್ಥಳೀಯರಿಗೆ ವಿತರಿಸದೇ ಇರುವುದರಿಂದ ಸ್ಥಳೀಯ ಕಾರ್ಡ್‌ದಾರರಿಗೆ ಆಗುತ್ತಿರುವ ತೊಂದರೆಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ?